## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1375 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 30.12.2022 |
| ಉತ್ತರಿಸುವ ಸಚಿವರು | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಒಟ್ಟು ಜನ ಸಂಖ್ಯೆಯಲ್ಲಿ ಶೇ. 50 ಕ್ಕಿಂತ ಮೇಲ್ಪಟ್ಟ ಜನರು ಹಿಂದುಳಿದ ಜಾತಿಗಳಿಗೆ ಸೇರಿರುವುದು ನಿಜವೇ; | ಸರ್ಕಾರದಲ್ಲಿ ಮಾಹಿತಿ ಲಭ್ಯವಿರುವುದಿಲ್ಲ. |
| ಆ) | ಹಾಗಿದ್ದಲ್ಲಿ, ರಾಜ್ಯದಲ್ಲಿರುವ ಹಿಂದುಳಿದ ಜಾತಿಗಳ ಸಾಮಾಜಿಕ, ರಾಜಕೀಯ ಹಾಗೂ ಆರ್ಥಿಕ ಪರಿಸ್ಥಿತಿಗಳನ್ನು ಅರಿಯಲು ಸರ್ಕಾರ ಜನಗಣತಿಯನ್ನು ಕೈಗೊಂಡಿದೆಯೇ ಮತ್ತು ಈ ಜನಗಣತಿಯಿಂದ ಹೊರಹೊಮ್ಮಿರುವ ವಿವರಗಳು ಯಾವುವು. (ಪೂರ್ಣ ಮಾಹಿತಿ ನೀಡುವುದು) | ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ-2015 ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಕೈಗೊಳ್ಳಲಾಗಿರುತ್ತದೆ. ಸಮೀಕ್ಷೆಯಲ್ಲಿ ಎಲ್ಲ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಮಾಹಿತಿಯನ್ನು ಸಂಗ್ರಹಿಸಿ, ಗಣಕೀಕರಿಸಿ ವರದಿಯನ್ನು ಸಿದ್ಧಪಡಿಸಲಾಗಿರುತ್ತದೆ.<br><br>ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ-2015ರ ವರದಿಯನ್ನು ಆಯೋಗದಿಂದ ಸರ್ಕಾರಕ್ಕೆ ಸಲ್ಲಿಸಿದ್ದಲ್ಲಿ ಪರಿಶೀಲಿಸಲಾಗುವುದು. |
| ಇ) | ರಾಜ್ಯದಲ್ಲಿರುವ ವಿವಿಧ ಹಿಂದುಳಿದ ಜಾತಿಗಳ ಅಭಿವೃದ್ಧಿಗೆ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಭಿವೃದ್ಧಿಗೆ ನಿಗದಿಪಡಿಸಿರುವ ಅನುದಾನದ ರೀತಿಯಲ್ಲಿ 2023-24 ರ ಅಯವ್ಯಯದಲ್ಲಿ ಅನುದಾನವನ್ನು ಒದಗಿಸಲು ಸರ್ಕಾರ ಮುಂದಾಗುವುದೇ? (ಪೂರ್ಣ ಮಾಹಿತಿ ನೀಡುವುದು) | ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಭಿವೃದ್ಧಿಗೆ ನಿಗಧಿಪಡಿಸಿರುವ ಜಾತಿಗಳ SCSP & TSP ಅನುದಾನದ ರೀತಿಯಲ್ಲಿ ಹಿಂದುಳಿದ ಅಭಿವೃದ್ಧಿಗೆ ಅನುದಾನ ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. ಆದಾಗ್ಯೂ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ 2023-24 ರ ಆಯವ್ಯಯದಲ್ಲಿ ಹೆಚ್ಚುವರಿ ಅನುದಾನ ಒದಗಿಸುವ ಬಗ್ಗೆ ಪರಿಶೀಲಿಸಲಾಗುವುದು. |

**ಸಂಖ್ಯೆ: ಹಿಂವಕ 304 ಬಿಸಿಎ 2022**

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು